# Akashvani : Bangalore
# Regional Bulletin In Kannada
# 13.12.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಉತ್ತರ ಕರ್ನಾಟಕ ಭಾಗದಲ್ಲಿ ಉದ್ಯೋಗ ಸೃಷ್ಟಿಗೆ ಆದ್ಯತೆ; ವಿಧಾನಪರಿಷತ್‌ನಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ**

**೨. ಬೆಂಗಳೂರಿನಲ್ಲಿ ಮಳೆಯಿಂದ ಆಗುವ ಹಾನಿ ತಡೆಗಟ್ಟಲು ಶಾಶ್ವತ ಯೋಜನೆಗೆ ಸರ್ಕಾರ ನಿರ್ಧಾರ**

**೩. ರೈತರು ಸಿರಿಧಾನ್ಯ ಕೃಷಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತೊಡಗಿಸಿಕೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ**

**೪. ಆಲಮಟ್ಟಿ ಅಣೆಕಟ್ಟಿನ ಎತ್ತರ ೫೨೪ ಅಡಿಗಳಿಗೆ ಹೆಚ್ಚಿಸಲು ಸರ್ಕಾರ ಬದ್ಧ; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೫. ರೇಣುಕಾಸ್ವಾಮಿ ಹತ್ಯೆ ಪ್ರಕರಣ; ನಟ ದರ್ಶನ್ ಸೇರಿ ಏಳು ಮಂದಿಗೆ ಹೈಕೋರ್ಟ್ ಜಾಮೀನು**

**<><*<><>*><>**

ಉತ್ತರ ಕರ್ನಾಟಕ ಭಾಗದಲ್ಲಿ ಉದ್ಯೋಗ ಸೃಷ್ಟಿಯ ಉದ್ದೇಶದಿಂದ ಬಿಯಾಂಡ್ ಬೆಂಗಳೂರು ಕಾರ್ಯಕ್ರಮದಡಿಯಲ್ಲಿ ೪೩೨ ನವೋದ್ಯಮ ಉದ್ದಿಮೆಗಳು ಆರಂಭಕ್ಕೆ ನೋಂದಣಿಯನ್ನು ಮಾಡಿಕೊಂಡಿವೆ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನ ಪರಿಷತ್ತಿನಲ್ಲಿ ನಡೆದ ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ ನಡೆದ ವಿಶೇಷ ಚರ್ಚೆ ಸಂದರ್ಭದಲ್ಲಿ ಉತ್ತರಿಸಿದ ಅವರು, ಎಲೆಕ್ಟ್ರಾನಿಕ್ ವಸ್ತುಗಳ ತಯಾರಿಕೆ , ಹೊಸ ಆವಿಷ್ಕಾರಗಳನ್ನು ಮಾಡುವ ನಿಟ್ಟಿನಲ್ಲಿ ೪೩೨ ನವೋದ್ಯಮ ಉದ್ದಿಮೆಗಳ ಆರಂಭಕ್ಕೆ ನೋಂದಣಿ ಮಾಡಿಕೊಂಡಿದ್ದು ಆ ಮೂಲಕ ಈ ಭಾಗದಲ್ಲಿ ಹೆಚ್ಚಿನ ಉದ್ಯೋಗ ಸೃಷ್ಟಿ ಯಾಗಲಿದೆ ಎಂದು ನಿಪುಣ ಕರ್ನಾಟಕ ಯೋಜನೆಯಡಿ ಕೂಡಾ ಈ ಭಾಗಕ್ಕೆ ಹೆಚ್ಚಿನ ಅವಕಾಶಗಳನ್ನು ನೀಡಲಾಗುತ್ತಿದೆ ಎಂದು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ , ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಸಿಕ ಗೌರವ ಧನವನ್ನು ಹೆಚ್ಚಳ ಮಾಡುವ ಕುರಿತ ಬೇಡಿಕೆಯನ್ನು ಮುಖ್ಯಮಂತ್ರಿ ಅವರ ಗಮನಕ್ಕೆ ತರಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಸದನಕ್ಕೆ ತಿಳಿಸಿದ್ದಾರೆ.

**<><*<><>*><>**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರದೇಶಗಳಲ್ಲಿ ಅತಿಹೆಚ್ಚು ಮಳೆಯಿಂದ ಪ್ರವಾಹ ರೀತಿಯಲ್ಲಿ ಉಂಟಾಗುವ ಅತಿವೃಷ್ಟಿಯ ಹಾನಿಯನ್ನು ತಡೆಗಟ್ಟಲು ಒಟ್ಟು ೫ ಸಾವಿರ ಕೋಟಿ ರೂಪಾಯಿಗಳ ಶಾಶ್ವತ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನಸಭೆಗೆ ತಿಳಿಸಿದ್ದಾರೆ. ಬೆಂಗಳೂರು ವ್ಯಾಪ್ತಿಯಲ್ಲಿ ಅತಿ ಹೆಚ್ಚು ಮಳೆ ಸುರಿದಾಗ ಪದೇ ಪದೇ ಹಾನಿಗೊಳಗಾಗುವ ಪ್ರದೇಶಗಳನ್ನು ಗುರುತಿಸಲಾಗಿದೆ. ಈ ವರ್ಷ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ಪೂರ್ವ ಮುಂಗಾರು, ಮುಂಗಾರು, ಹಿಂಗಾರಿನಲ್ಲಿ ಸರಾಸರಿ ಶೇ.೨೦ರಷ್ಟು ಹೆಚ್ಚು ಮಳೆಯಾಗಿದೆ. ಮಳೆ ಅವಘಡಗಳಲ್ಲಿ ೧೩೩ ಮಂದಿ ಪ್ರಾಣ ಕಳೆದುಕೊಂಡಿದ್ದು, ಅವರ ಕುಟುಂಬಕ್ಕೆ ತಲಾ ೫ ಲಕ್ಷದಂತೆ. ೬ಕೋಟಿ ೬೪ ಕೋಟಿ ರೂಪಾಯಿ ಪರಿಹಾರ ನೀಡಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

**<><*<><>*><>**

ವಕ್ಫ್ ವಿಚಾರ ಕುರಿತು ಚರ್ಚೆಗೆ ಪ್ರತಿಪಕ್ಷ ಅನುಮತಿ ಕೋರಿದ್ದರೂ ಕೂಡ ಆಡಳಿತ ಪಕ್ಷ ಸದಸ್ಯರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚರ್ಚಿಸಬೇಕಾದ ಅನೇಕ ವಿಚಾರಗಳಿದ್ದರೂ ಸರ್ಕಾರ ಅವುಗಳ ಬಗ್ಗೆ ಸಮರ್ಪಕ ಮಾಹಿತಿ ನೀಡುತ್ತಿಲ್ಲ ಎಂದು ದೂರಿದ್ದಾರೆ. ಉತ್ತರ ಕರ್ನಾಟಕ ಅಭಿವೃದ್ಧಿ ವಿಚಾರ, ವಕ್ಫ್ ವಿಚಾರ, ಬಾಣಂತಿಯರ ಸರಣಿ ಸಾವು ಸೇರಿದಂತೆ ಅನೇಕ ವಿಚಾರಗಳ ಬಗ್ಗೆ ಚರ್ಚೆ ಆಗಬೇಕಿದೆ. ಆದರೆ ಆಡಳಿತಾರೂಢ ಸದಸ್ಯರು ಸಭೆಯ ನಿಯಮಗಳನ್ನು ಗಾಳಿಗೆ ತೂರುತ್ತಿದ್ದಾರೆ. ಸ್ಪೀಕರ್ ಕೂಡ ನಿಷ್ಪಕ್ಷಪಾತವಾಗಿ ನಡೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿದ್ದಾರೆ.

**<><*<><>*><>**

ಭಾರತದಲ್ಲಿ ಕರ್ನಾಟಕ ಸಿರಿಧಾನ್ಯ ಉತ್ಪಾದನೆಯಲ್ಲಿ ಮೂರನೇ ಸ್ಥಾನದಲ್ಲಿದೆ. ಆದರೂ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸಿರಿಧಾನ್ಯ ಕೃಷಿಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಬೆಳಗಾವಿ ಸುವರ್ಣಸೌಧದಲ್ಲಿ ಅಂತರರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯ ವಾಣಿಜ್ಯ ಮೇಳದ ಪೂರ್ವಭಾವಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ದೇಶ ವಿದೇಶಗಳಲ್ಲಿ ಸಿರಿಧಾನ್ಯಗಳ ಬೇಡಿಕೆ ಹೆಚ್ಚಾಗುತ್ತಿದೆ. ವಿಶ್ವದಲ್ಲಿ ೯೦೩.೬೧ ಲಕ್ಷ ಟನ್ ಗಳಷ್ಟು ಸಿರಿಧಾನ್ಯ ಬೆಳೆಯಲಾಗುತ್ತಿದೆ. ಭಾರತದಲ್ಲಿ ಶೇಕಡ ೩೧.೫೦ ರಷ್ಟು ಬೆಳೆಯುತ್ತಿದ್ದು, ವಿಶ್ವದಲ್ಲಿ ಅತ್ಯಂತ

ಹೆಚ್ಚು ಸಿರಿಧಾನ್ಯ ಬೆಳೆಯುವ ದೇಶವಾಗಿದೆ. ಸುಮಾರು ೧೮.೩೮ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ೨೨.೧೯ ಲಕ್ಷ ಟನ್ ಗಳಷ್ಟು ಸಿರಿಧಾನ್ಯವನ್ನು ರಾಜ್ಯದಲ್ಲಿ ಬೆಳೆಯಲಾಗುತ್ತಿದೆ. ಸಿರಿ ಧಾನ್ಯದಲ್ಲಿ ಪ್ರೊಟೀನ್ ಹಾಗೂ ನಾರಿನ ಅಂಶ ಹೆಚ್ಚಾಗಿದ್ದು ರೋಗನಿರೋಧಕ ಶಕ್ತಿ ಹೆಚ್ಚಿಸಲು ಹಾಗೂ ಸಕ್ಕರೆ ಕಾಯಿಲೆಯನ್ನು ನಿಯಂತ್ರಿಸಲು ಸಿರಿಧಾನ್ಯದ ಬಳಕೆ ಸಹಕಾರಿಯಾಗಿದೆ ಎಂದು ಹೇಳಿದರು.

ಸಿರಿಧಾನ್ಯದ ಪಾಕಗಳು ಕೇವಲ ಪ್ರದರ್ಶನಕ್ಕೆ ಸೀಮಿತವಾಗದೆ, ಪ್ರತಿದಿನದ ಆಹಾರ ಸೇವನೆಯಲ್ಲಿ ಬಳಕೆಯಾಗಲಿ ಎಂದು ವಿಜಯನಗರ ಜಿಲ್ಲಾಧಿಕಾರಿ ಎಂಎಸ್ ದಿವಾಕರ್ ತಿಳಿಸಿದ್ದಾರೆ. ಈ ಸ್ಪರ್ಧೆಯಲ್ಲಿ ವಿವಿಧ ತಾಲೂಕು ಮತ್ತು ಹೋಬಳಿಗಳಿಂದ ಆಗಮಿಸಿದ ೫೦ ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿ, ವಿವಿಧ ಅಪರೂಪದ ಖಾದ್ಯಗಳನ್ನು ತಯಾರಿಸಿ ಪ್ರದರ್ಶನಕ್ಕೆ ಇಟ್ಟಿದ್ದರು.

**<><*<><>*><>**

ಕೇಂದ್ರ ಸರ್ಕಾರ “ಒಂದು ದೇಶ ಒಂದು ಚುನಾವಣೆ ಮೂಲಕ ಸಣ್ಣ ಪಕ್ಷಗಳನ್ನು ಮುಗಿಸುವ ಹುನ್ನಾರ ನಡೆಸುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಟಿಎಂಸಿ, ಡಿಎಂಕೆ, ಎಸ್ ಪಿ, ಕಮ್ಯುನಿಷ್ಟ್ ಸೇರಿದಂತೆ ಪ್ರಾದೇಶಿಕ ಪಕ್ಷಗಳಿಂದ ಇಂಡಿಯಾ ಒಕ್ಕೂಟದ ಸಂಖ್ಯಾಬಲ ಹೆಚ್ಚಾಗಿದೆ. ಹೀಗಾಗಿ ಈ ಪಕ್ಷಗಳನ್ನು ಮುಗಿಸಲು ಬಿಜೆಪಿ ಪ್ರಯತ್ನಿಸುತ್ತಿದೆ” ಎಂದು ದೂರಿದ್ದಾರೆ. ಇದೇ ವೇಳೆ ಆಲಮಟ್ಟಿ ಅಣೆಕಟ್ಟಿನ ಎತ್ತರ ಹೆಚ್ಚಳದ ಬಗ್ಗೆ ಪ್ರತಿಕ್ರಿಯಿಸಿ, “ಆಲಮಟ್ಟಿ ಜಲಾಶಯ ಎತ್ತರವನ್ನು ೫೨೪ ಅಡಿಗಳಿಗೆ ಹೆಚ್ಚಿಸಲು ಬದ್ಧವಾಗಿರುವುದಾಗಿ ತಿಳಿಸಿದ್ದಾರೆ. ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಜನಪ್ರತಿನಿಧಿಗಳ ಸಭೆ ನಡೆಯಲಿದೆ ಎಂದು ಹೇಳಿದ್ದಾರೆ.

**<><*<><>*><>**

ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಸಿದಂತೆ ನಟ ದರ್ಶನ್ ಸೇರಿದಂತೆ ಏಳು ಮಂದಿಗೆ ಆರೋಪಿಗಳಿಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ. ಸುದೀರ್ಘ ವಾದ-ಪ್ರತಿವಾದ ಆಲಿಸಿ, ಇದೇ ೯ ರಂದು ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿ ಎಸ್.ವಿಶ್ವಜಿತ್ ಶೆಟ್ಟಿ ಅವರಿದ್ದ ಏಕಸದಸ್ಯ ನ್ಯಾಯಪೀಠ ತೀರ್ಪು ಪ್ರಕಟಿಸಿದೆ. ಆರೋಪಿಗಳಾದ ದರ್ಶನ್, ಪವಿತ್ರಾಗೌಡ ಸೇರಿದಂತೆ ಏಳು ಮಂದಿಗೆ ಜಾಮೀನು ದೊರೆತಿದೆ.

**<><*<><>*><>**

ಕೃಷಿ ಕಾಯ್ದೆ ರದ್ದತಿ, ಎಂಎಸ್‌ಪಿ ಕಾನೂನಾತ್ಮಕ ಜಾರಿ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಬೆಳಗಾವಿ ಅಧಿವೇಶನದ ಹಿನ್ನೆಲೆಯಲ್ಲಿ ಸುವರ್ಣ ಸೌಧದ ಬಳಿ ನೂರಾರು ರೈತರು ಪ್ರತಿಭಟನೆ ನಡೆಸಿದರು. ರೈತ ಮುಖಂಡ ಕೋಡಿಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಹಲವು ಸಂಘಟನೆಗಳು ಪಾಲ್ಗೊಂಡಿದ್ದವು. ಕೋಡಿಹಳ್ಳಿ ಚಂದ್ರಶೇಖರ್ ಮಾತನಾಡಿ, ರೈತರ ಬಗ್ಗೆ ಕಾಳಜಿ ತೋರಿಸುವ ಕಾಂಗ್ರೆಸ್ ಸರ್ಕಾರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ, ಹೆದ್ದಾರಿ ತಡೆ ಚಳವಳಿಗೆ ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ರೈತರ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಉನ್ನತ ಶಿಕ್ಷಣ ಸಚಿವ ಎಮ್.ಸಿ.ಸುಧಾಕರ್ ಮಾತನಾಡಿ, ರೈತರ ಬೇಡಿಕೆಗಳನ್ನು ಪರಿಶೀಲಿಸಲಾಗಿದ್ದು, ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರು ನಗರದ ದಕ್ಷಿಣ ಹಾಗೂ ಬೊಮ್ಮನಹಳ್ಳಿ ವಲಯಗಳಲ್ಲಿ ಇಂದು ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಯಿತು. ವಲಯ ಆಯುಕ್ತರುಗಳ ಹಾಗೂ ವಲಯ ಜಂಟಿ ಆಯುಕ್ತರ ನಿರ್ದೇಶನದ ಮೇರೆಗೆ ಇಂದು ವಿವಿಧ ಸ್ಥಳಗಳಲ್ಲಿ ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡು ನಾಗರೀಕರ ಓಡಾಟಕ್ಕೆ ಸಮಸ್ಯೆಯಾಗುತ್ತಿರುವುದನ್ನು ಗಮನಿಸಿ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಯಿತು. ಚೋಳರಪಾಳ್ಯ ವ್ಯಾಪ್ತಿಯಲ್ಲಿನ ಮಾಗಡಿ ಮುಖ್ಯರಸ್ತೆ ಹಾಗೂ ಬೊಮ್ಮನಹಳ್ಳಿ ವಲಯದ ಜಂಬೂ ಸವಾರಿ ದಿಣ್ಣೆ ಮುಖ್ಯರಸ್ತೆಯಲ್ಲಿನ ಪಾದಚಾರಿ ಮಾರ್ಗ ಒತ್ತುವರಿಗಳನ್ನು ತೆರವುಗೊಳಿಸಲಾಗಿದೆ.

**<><*<><>*><>**

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ರಾಮನಗರ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ನಿವೇಶನ ಲಭ್ಯವಿಲ್ಲದ ಅಂಗನವಾಡಿ ಕೇಂದ್ರಗಳಿಗೆ ೪೫ ದಿನಗಳೊಳಗೆ ನಿವೇಶನ ಗುರುತಿಸಲು ಅಗತ್ಯ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೨. ಅಪರಾಧ ತಡೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

೩. ಹಾಸನ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ಉತ್ತಮಗೊಳಿಸಲು ಹಾಗೂ ರಾಜ್ಯದಲ್ಲೇ ಜಿಲ್ಲೆಯನ್ನು ಮತ್ತೊಮ್ಮೆ ಮೊದಲ ಸ್ಥಾನಕ್ಕೆ ಕೊಂಡೊಯ್ಯಲು ಪ್ರಯತ್ನಿಸಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಹೆಚ್.ಕೆ.ಪಾಂಡು ತಿಳಿಸಿದ್ದಾರೆ.

೪. ಅಂಚೆ ಇಲಾಖೆ ವತಿಯಿಂದ ಇದೇ ಡಿ. ೧೬ ರಂದು ಬೆಳಿಗ್ಗೆ ೧೧ ಗಂಟೆಗೆ ಚನ್ನಪಟ್ಟಣದ ಅಂಚೆ ವಿಭಾಗೀಯ ಕಚೇರಿಯಲ್ಲಿ ಡಾಕ್ ಅದಾಲತ್ ಆಯೋಜಿಸಲಾಗಿದೆ.

೫. ಶಿವಮೊಗ್ಗದಲ್ಲಿ ಮಾದಕ ವಸ್ತು ಗಾಂಜಾ ಹಾವಳಿ ತಡೆಗಟ್ಟುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಕುಮಾರ್ ಗೆ ಬಿಜೆಪಿ ನಿಯೋಗ ಮನವಿ ಸಲ್ಲಿಸಿತು.

೬. ಮಾರ್ಚ್ ಅಂತ್ಯದೊಳಗೆ ಯಶವಂತಪುರ ಎಂಇಐ ರಸ್ತೆ ವೈಟ್ ಟಾಪಿಂಗ್ ಕಾಮಗಾರಿ ಪೂರ್ಣಗೊಳಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸೂಚಿಸಿದ್ದಾರೆ. ಇದೇ ವೇಳೆ ನಾಗರಭಾವಿ ಕೆರೆಗೆ ಕೂಡಲೇ ಫೆನ್ಸಿಂಗ್ ಅಳವಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

೭. ಬಹುಮಾಧ್ಯಮ ನಿರ್ವಹಣೆಯಲ್ಲಿ ಹೊಸ ಸಾಧ್ಯತೆಗಳ ಕುರಿತಾಗಿ ಮತ್ತಷ್ಟು ಸಂಶೋಧನೆಗಳ ಅವಶ್ಯಕತೆಯಿದ್ದು ಈ ಹಿನ್ನಲೆಯಲ್ಲಿ ವಿದ್ಯಾಸಂಸ್ಥೆಗಳಲ್ಲಿ ಸಂಶೋಧನಾ ಕೇಂದ್ರಗಳು ಪ್ರಾರಂಭವಾಗಲಿ ಎಂದು ಶಿವಮೊಗ್ಗದಲ್ಲಿ ಬೆಂಗಳೂರು ಐಐಎಸ್ಸಿ ಪ್ರಾಧ್ಯಾಪಕ ಟಿ.ಶ್ರೀನಿವಾಸ ಅಭಿಪ್ರಾಯಪಟ್ಟಿದ್ದಾರೆ.

೮. ಚಿಕ್ಕಬಳ್ಳಾಪುರ ನಗರದ ಚದುಲಪುರ ಬಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಉಚಿತ ಊಟ ವಸತಿ ಸಹಿತ ಕಂಪ್ಯೂಟರ್ ಡಿಟಿಪಿ ಮತ್ತು ವಾಣಿಜ್ಯ ತೋಟಗಾರಿಕೆ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

೯. ಕೋಲಾರ ಜಿಲ್ಲೆಯಾದ್ಯಂತ ಇಂದು ಶ್ರೀ ವೀರಾಂಜನೇಯ ದೇವಸ್ಥಾನಗಳಲ್ಲಿ ಹನುಮ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

೧೦. ಚಿಕ್ಕಬಳ್ಳಾಪುರ ಜಿಲ್ಲೆಯ ವಿವಿಧ ದೇವಾಲಯಗಳಲ್ಲಿಯೂ ಹನುಮ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**